# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-2024ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹೆಚ್ಚುವರಿಯಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡುವ ಬಗ್ಗೆ.

**ಓದಲಾಗಿದೆ:** 1.ಸರ್ಕಾರದ ಆದೇಶ ಸಂಖ್ಯೆ: ಇಪಿ 14 ಎಸ್ಇಎಸ್ 2022, ದಿನಾಂಕ: 12/07/2022.
2.ಸರ್ಕಾರದ ಆದೇಶ ಸಂಖ್ಯೆ: ಇಪಿ 166 ಎಸ್ಇಎಸ್ 2023, ದಿನಾಂಕ: 25/05/2023.
ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಬೆಂಗಳೂರು ಇವರ ಪತ್ರಸಂಖ್ಯೆ:ಸಿ3(1)ಪ್ರಾ.ಶಿ.ಅ.ಶಿ.ನೇ.01/2023-24, ದಿನಾಂಕ:27/07/2023.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಶೈಕ್ಷಣಿಕ ಹಿತದೃಷ್ಟಿಯಿಂದ ಮತ್ತು ಉತ್ತಮ ಗುಣಮಟ್ಟದ ಶೈಕ್ಷಣಿಕ ಬಲವರ್ಧನೆಯ ಸಲುವಾಗಿ 2022-23ನೇ ಶೈಕ್ಷಣಿಕ ಸಾಲಿಗೆ ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 26,000 ಹಾಗೂ ಪ್ರೌಢಶಾಲೆಗಳಲ್ಲಿ 6,078 ಒಟ್ಟು 32,078 ಅತಿಥಿ ಶಿಕ್ಷಕರುಗಳನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ 2023-24ನೇ ಶೈಕ್ಷಣಿಕ ಸಾಲಿಗೆ ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 27,000 ಹಾಗೂ ಸರ್ಕಾರಿ ಪ್ರೌಢಶಾಲೆಗಳಲ್ಲಿ 6000 ಒಟ್ಟು 33,000 ಅತಿಥಿ ಶಿಕ್ಷಕರುಗಳನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರದಲ್ಲಿ 2023-24ನೇ ಸಾಲಿಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ಈಗಾಗಲೇ ಆರ್ಥಿಕ ಇಲಾಖೆ ಅನುಮತಿ ನೀಡಿರುವ 27000 ಹುದ್ದೆಗಳಿಗೆ ಈಗಾಗಲೇ ನೇಮಕ ಮಾಡಲು ಅನುಮತಿ ನೀಡಲಾಗಿದೆ. ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ 15,000 ಪದವೀಧರ ಪ್ರಾಥಮಿಕ ಶಿಕ್ಷಕರನ್ನು (6 ರಿಂದ 8ನೇ ತರಗತಿ) ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿಗಾಗಿ ದಿ:21-03-2022 ರಂದು ಅಧಿಸೂಚನೆಯನ್ನು ಹೊರಡಿಸಿ, ನೇಮಕಾತಿ ಸಂಬಂಧ ಅಗತ್ಯ ಪ್ರಕ್ರಿಯೆಗಳ ನಂತರ 1:1 ಮುಖ್ಯ ಆಯ್ಕೆಪಟ್ಟಿಯನ್ನು ದಿನಾಂಕ: 08-03-2023 ರಂದು ಪ್ರಕಟಿಸಲಾಗಿದ್ದು, ಒಟ್ಟು 13,352 ಅಭ್ಯರ್ಥಿಗಳು ಆಯ್ಕೆಯಾಗಿರುತ್ತಾರೆ. ಸದರಿ ಶಿಕ್ಷಕರ ನೇಮಕಾತಿಗಳಿಗೆ ಕುರಿತಂತೆ ಮಾನ್ಯ ಉಚ್ಚನ್ಯಾಯಾಲಯದಲ್ಲಿ ದಾಖಲಾಗಿದ್ದ W.P.No.23752/2022ರಲ್ಲಿ ದಿನಾಂಕ30-01-2023 ರಂದು ನೀಡಿದ ತೀರ್ಪಿನಂತೆ ದಿನಾಂಕ:18-11-2022 ರಂದು ಪ್ರಕಟಿಸಲಾಗಿದ್ದ 1:1 ತಾತ್ಕಾಲಿಕ ಆಯ್ಕೆಪಟ್ಟಿಯನ್ನು ರದ್ದುಗೊಳಿಸಿತ್ತು. ಮಾನ್ಯ ನ್ಯಾಯಾಲಯದ ತೀರ್ಪಿನಂತೆ ಹಾಗೂ ಸರ್ಕಾರದ ನಡವಳಿಯ ದಿನಾಂಕ:07-02-2023 ರಂತೆ ಕ್ರಮವಹಿಸಿ, ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿ, ದಿನಾಂಕ:08-03-2023 ರಂದು ಪ್ರಕಟಿಸಲಾಯಿತು.

ದಿನಾಂಕ:18-11-2022 ರಂದು ಪ್ರಕಟಿಸಲಾಗಿದ್ದ ಹಾಗೂ ನ್ಯಾಯಾಲಯದ ತೀರ್ಪಿನಂತೆ ರದ್ದಾದ ಪಟ್ಟಿಯಲ್ಲಿದ್ದ ಕೆಲವು ಅಭ್ಯರ್ಥಿಗಳು ಆಯ್ಕೆಯಾಗದ ಹಿನ್ನೆಲೆಯಲ್ಲಿ ಮಾನ್ಯ ಉಚ್ಚನ್ಯಾಯಾಲಯದಲ್ಲಿ

WA.No.305/2023 ಮತ್ತು ಇತರರು ಒಟ್ಟು 05 ಸಂಬಂಧಿತ ಪ್ರಕರಣಗಳಲ್ಲಿ ಮೇಲ್ಮನವಿ ಸಲ್ಲಿಸಿದ್ದು, ಸದರಿ ಪ್ರಕರಣಗಳು ವಿಚಾರಣೆಯ ಹಂತದಲ್ಲಿದೆ. ಪ್ರಕರಣದಲ್ಲಿ ದಿನಾಂಕ:02-05-2023 ರಂದು ನೀಡಿರುವ ಮಧ್ಯಂತರ ತೀರ್ಪಿನಲ್ಲಿ "The Selection process Shall go on without announcing the result till the next date of hearing" ಎಂದು ಆದೇಶಿಸಲಾಗಿದೆ.

ಮಾನ್ಯ ಕೆ.ಎ.ಟಿ ನ್ಯಾಯಾಲಯ ಬೆಂಗಳೂರು ಇಲ್ಲಿ ದಾಖಲಾಗಿರುವ ಅರ್ಜಿ ಸಂಖ್ಯೆ : 2409-13 ಮತ್ತು 2417-2419/2023 ರಲ್ಲಿ ಮತ್ತು ಮಾನ್ಯ ಕೆ.ಎ.ಟಿ ನ್ಯಾಯಾಲಯ ಬೆಳಗಾವಿ ಇಲ್ಲಿ ಅರ್ಜಿ ಸಂಖ್ಯೆ: 10445/2023 ಮತ್ತು 10485/2023ರಲ್ಲಿ ಅಭ್ಯರ್ಥಿಗಳು ಪ್ರಕರಣ ದಾಖಲಿಸಿದ್ದು (ಆಯ್ಕೆಪಟ್ಟಿಯಿಂದ Delete ಆಗಿರುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ) ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ಮಧ್ಯಂತರ ಆದೇಶದಲ್ಲಿ ತಡೆಯಾಜ್ಞೆ ನೀಡಿರುತ್ತದೆ.
1:1 ಮುಖ್ಯ ಆಯ್ಕೆಪಟ್ಟಿಯಲ್ಲಿನ ಅಭ್ಯರ್ಥಿಗಳ ಮೂಲದಾಖಲೆಗಳ ನೈಜತೆ ಪರಿಶೀಲನಾ ಕಾರ್ಯವನ್ನು ಕೈಗೊಳ್ಳುವಂತೆ ಆಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರಕ್ಕೆ ಸೂಚಿಸಲಾಗಿದ್ದು, ನೈಜತೆಯ ಪರಿಶೀಲನಾ ಕಾರ್ಯವು ಆಯಾ ಜಿಲ್ಲಾ ಉಪನಿರ್ದೇಶಕರ ಕಛೇರಿ ಹಂತದಲ್ಲಿ ಪ್ರಗತಿಯಲ್ಲಿರುತ್ತದೆ.

ಕಲ್ಯಾಣ ಕರ್ನಾಟಕ ವಿಭಾಗಕ್ಕೆ ಸಂಬಂಧಿಸಿದಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 03 ಹೈಕಕೋ 2019, ದಿ::01.02.2023ರಲ್ಲಿ ಅರ್ಜಿ ಸಲ್ಲಿಸುವ ಸಮಯದಲ್ಲಿ ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಸ್ಥಳೀಯ ಅಭ್ಯರ್ಥಿಗಳಿಂದ ಪಡೆಯಲಾಗಿರುವ ಆಯ್ಕೆಯನ್ನು ಪರಿಗಣಿಸದೇ, ಮೆರಿಟ್ ಪಟ್ಟಿಯಿಂದ ಆಯ್ಕೆಪಟ್ಟಿ ತಯಾರಿಸುವಲ್ಲಿ ಸ್ಥಳೀಯ ಅಭ್ಯರ್ಥಿಗಳನ್ನು ಮೊದಲಿಗೆ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಪರಿಗಣಿಸಿ, ಆಯ್ಕೆಪಟ್ಟಿ ತಯಾರಿಸುವಂತೆ ಆದೇಶವಿದ್ದ ಕಾರಣ ಅದರಂತೆ ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿ, ಪ್ರಕಟಿಸಿದ್ದರಿಂದ ಮಾನ್ಯ ಕೆ.ಎ.ಟಿ ನ್ಯಾಯಾಲಯ ಕಲಬುರಗಿ ಪೀಠ ಇಲ್ಲಿ ದಾಖಲಾಗಿರುವ ಅರ್ಜಿ ಸಂಖ್ಯೆ : 2013-2014/2023 ಮತ್ತು 20167-20168/2023, ಮತ್ತಿತರ ಒಟ್ಟು 08 ಪ್ರಕರಣಗಳಿಗೆ ಸಂಬಂಧಿಸಿದಂತೆ ನೀಡಿರುವ ಮಧ್ಯಂತರ ತೀರ್ಪಿನಲ್ಲಿ "The Selection process Shall go on without announcing the result till the next date of hearing" ಎಂದು ಆದೇಶಿಸಲಾಗಿದೆ ಹಾಗೂ ಪ್ರಕರಣಗಳು ವಿಚಾರಣೆಯ ಹಂತದಲ್ಲಿದೆ.

ಉಪನಿರ್ದೇಶಕರು, ಯಾದಗಿರಿ ಇವರು ಜಿಲ್ಲೆಗೆ ಒಟ್ಟು 5625 ಹುದ್ದೆಗಳು ಮ[illegible] ವರ್ಗಾವಣೆ ಪೂರ್ವದಲ್ಲಿ 2466 ಖಾಲಿ ಹುದ್ದೆಗಳಿದ್ದು, ಅಂತರ ಜಿಲ್ಲಾ ವರ್ಗಾವಣೆಯಿಂದ 180 ಹುದ್ದೆಗಳು ತೆರವಾಗಿದ್ದು, ಅಂತರ ವಿಭಾಗ ವರ್ಗಾವಣೆಯಿಂದ 120 ರಿಂದ 140 ಹುದ್ದೆಗಳು ತೆರವಾಗುವ ಸಂಭವಿರುತ್ತದೆ 2466 ಖಾಲಿ ಹುದ್ದೆಗಳ ಎದುರಾಗಿ 1364. ಅತಿಥಿ ಶಿಕ್ಷಕರ ಹುದ್ದೆಗಳನ್ನು ಹಂಚಿಕೆ ಮಾಡಲಾಗಿದೆ. ಅಂದರೆ 1102 ಖಾಲಿ ಹುದ್ದೆಗಳು ಬಾಕಿ ಉಳಿಯುತ್ತವೆ. ಆದ್ದರಿಂದ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು, ಶಿಕ್ಷಕರ ಕೊರತೆ ನೀಗಿಸಲು ಆರ್ಥಿಕ ಇಲಾಖೆಯಿಂದ ಅನುಮತಿ ನೀಡಲಾದ 27000 ಅತಿಥಿ ಶಿಕ್ಷಕರ ಹುದ್ದೆಗಳನ್ನು ಜಿಲ್ಲೆಗಳಿಗೆ ಹಂಚಿಕೆ ಮಾಡಲಾಗಿದ್ದು, ಜಿಲ್ಲಾ ಉಪನಿರ್ದೇಶಕರು ಸಹ ತಾಲ್ಲೂಕುಗಳಿಗೆ ಹಂಚಿಕೆ ಮಾಡಿರುತ್ತಾರೆ. ಆದರೆ, ಹಂಚಿಕೆ ಮಾಡಿರುವ ಹುದ್ದೆಗಳು ತೀವ್ರ ಕೊರತೆಯಾಗಿದ್ದು, ಹೆಚ್ಚುವರಿಯಾಗಿ ಅತಿಥಿ ಶಿಕ್ಷಕರ ಹುದ್ದೆಗಳನ್ನು ಹಂಚಿಕೆ ಮಾಡುವಂತೆ ಕೋರಿ ಪ್ರಜಾ ಪ್ರತಿನಿಧಿಗಳಿಂದ ಕೋರಿಕೆಗಳು ಸ್ವೀಕೃತವಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ /ಪ್ರೌಢಶಾಲೆಗಳಲ್ಲಿ (6 ರಿಂದ 8ನೇ ತರಗತಿಯವರೆಗೆ) ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ 15000 ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಲು ಅನುಮತಿ ನೀಡುವಂತೆ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಇಲಾಖಾ ಮುಖ್ಯಸ್ಥರ ಪ್ರಸ್ತಾವನೆಯನ್ನು ಪರಿಶೀಲಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2023-24ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳಿಗೆ ಹಾಗೂ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ಈ ಕೆಳಕಂಡಂತೆ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಅಥವಾ 2024ನೇ ಶೈಕ್ಷಣಿಕ ಸಾಲಿಗೆ ನೇಮಕ ಮಾಡಿಕೊಳ್ಳಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಇಪಿ 166 ಎಸ್‌ಇಎಸ್ 2023,</u>**

**<u>ದಿನಾಂಕ: 18/08/2023</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ 2023-24 ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರುಗಳ ಹುದ್ದೆಗಳಿಗೆದುರಾಗಿ ಈ ಕೆಳಕಂಡಂತೆ ಒಟ್ಟು 10,000 ಅತಿಥಿ ಶಿಕ್ಷಕರುಗಳನ್ನು ಹೆಚ್ಚುವರಿಯಾಗಿ ನೇಮಕಾತಿ ಮಾಡಿಕೊಳ್ಳಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

| ಕ್ರ.ಸಂ | ಶಾಲೆಗಳ ವಿವರ | ಶಿಕ್ಷಕರ ಸಂಖ್ಯೆ |
|---|---|---|
| 1. | ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ | 8000 |
| 2. | ಸರ್ಕಾರಿ ಪ್ರೌಢಶಾಲೆಗಳಲ್ಲಿ | 2000 |
| | ಒಟ್ಟು | **10,000** |

ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರುಗಳು ಕೌನ್ಸಿಲಿಂಗ್ ಮೂಲಕ ಹುದ್ದೆಗಳನ್ನು ಆಯ್ಕೆ ಮಾಡಿಕೊಂಡಿದ್ದು, ಕೌನ್ಸಿಲಿಂಗ್ ಮುಖಾಂತರ ಖಾಲಿಯಾಗಿರುವ ಹುದ್ದೆಗಳನ್ನು ಹಾಗೂ ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಆದ್ಯತೆ ಮೇರೆಗೆ ಪೂರ್ಣ ಪ್ರಮಾಣದಲ್ಲಿ ಅತಿಥಿ ಶಿಕ್ಷಕರಿಂದ ಭರ್ತಿ ಮಾಡಲು ಕ್ರಮವಹಿಸುವುದು.

ಮೇಲ್ಕಂಡಂತೆ 2023-24 ನೇ ಶೈಕ್ಷಣಿಕ ಸಾಲಿಗೆ ನೇಮಕಾತಿ ಮಾಡಿಕೊಳ್ಳಲಾಗುವ ಒಟ್ಟು 10000 ಅತಿಥಿ ಶಿಕ್ಷಕರ ಗೌರವಧನ ಪಾವತಿಗಾಗಿ ಅವಶ್ಯವಿರುವ ಅನುದಾನದ ವಿವರ ಹಾಗೂ ಅತಿಥಿ ಶಿಕ್ಷಕರ ಜಿಲ್ಲಾ / ತಾಲ್ಲೂಕುವಾರು ವಿವರಗಳೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 323 ವೆಚ್ಚ-8/2022(ಭಾಗ-1), ದಿನಾಂಕ:16.08.2023 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯ ಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

N. S. 18/8/2023

**(ವಿ.ಶ್ರೀನಿವಾಸಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು (ಎ & ಇ), ಕರ್ನಾಟಕ ಬೆಂಗಳೂರು.
2. ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.

4. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ/ ಧಾರವಾಡ.
5. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ) ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು(ಪ್ರೌಢಶಿಕ್ಷಣ) ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
7. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು (ಆಯುಕ್ತರ ಮೂಲಕ)
8. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರುಗಳು, ಶಾಲಾ ಶಿಕ್ಷಣ ಇಲಾಖೆ (ಆಯುಕ್ತರ ಮೂಲಕ)
9. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ- 8) ವಿಧಾನ ಸೌಧ ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸರ್ಕಾರದ ಅಪರ ಕಾರ್ಯದರ್ಶಿ (ಸೇವೆಗಳು-1) ರವರ ಆಪ್ತ ಸಹಾಯಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.